## ಮಾನ್ಯ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀಮತಿ ಉಮಾಶ್ರೀ ಇವರು ನಿಯಮ-72 ರಡಿ ಗಮನ ಸೆಳೆಯುವ ಸೂಚನೆಗೆ ಪ್ರಸ್ತಾಪಿಸಿರುವ ವಿಷಯಕ್ಕೆ ಮಾಹಿತಿ

**ವಿಷಯ:** ರಾಜ್ಯದಲ್ಲಿ ಯಾವುದೇ ಪದವಿ ಪೂರ್ವ, ಐಟಿಐ, ಪ್ಯಾರಾಮೆಡಿಕಲ್, ಡಿಪ್ಲೋಮಾ ಹಾಗೂ ತತ್ಸಮಾನ ಶಿಕ್ಷಣ ಸಂಸ್ಥೆಗಳಲ್ಲಿ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016 (ತಿದ್ದುಪಡಿ) ಅನುಷ್ಠಾನವಾಗಿಲ್ಲ, ಇದರ ಬಗ್ಗೆ ಕಾಲೇಜು ಆಡಳಿತ ಮಂಡಳಿ ಹಾಗೂ ಪ್ರಾಂಶುಪಾಲರಿಗೆ ಮಾಹಿತಿಯೇ ಇಲ್ಲ. ಬಾಲ ನ್ಯಾಯ ಕಾಯಿದೆ ಪ್ರಕಾರ 18 ವರ್ಷಕ್ಕಿಂತ ಕಡಿಮೆ ವಯಸ್ಸಿನವರನ್ನು ಮಕ್ಕಳೆಂದೇ ಪರಿಗಣಿಸಲಾಗುತ್ತದೆ. ಜತೆಗೆ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿಯು ಸಹ ಇದನ್ನೇ ಹೇಳಿದ್ದು, 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳ ವಿದ್ಯಾಭ್ಯಾಸ ಮಾಡುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿ ನೀತಿ ಅನುಷ್ಠಾನ ಕಡ್ಡಾಯವಾಗಿದೆ. ಆದರೆ ರಾಜ್ಯದ ಯಾವುದೇ ಪಿಯು ಕಾಲೇಜುಗಳಲ್ಲಿ ಈ ಅನುಷ್ಠಾನ ಅಗಿಲ್ಲ. ಈ ನಿರ್ಲಕ್ಷ್ಯವು ನಾನಾ ಅಪಾಯ, ತಪ್ಪುಗಳಿಗೆ ಎಡೆ ಮಾಡಿಕೊಡುತ್ತಿರುವುದರಿಂದ ಇದನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸುವುದು ಸರ್ಕಾರದ ಆದ್ಯ ಕರ್ತವ್ಯವಾಗಿರುವುದರಿಂದ ಈ ವಿಷಯವನ್ನು ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

### ಉತ್ತರ

ಬಾಲನ್ಯಾಯ (ಪಾಲನೆ ಮತ್ತು ರಕ್ಷಣೆ) ಕಾಯ್ದೆ-2015 ತಿದ್ದುಪಡಿ 2021 ರನ್ವಯ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ 2016 ಯನ್ನು ಪರಿಷ್ಕರಿಸಿ ದಿನಾಂಕ:14.12.2023 ರಂದು ಆದೇಶ ಹೊರಡಿಸಲಾಗಿದೆ. ಸದರಿ ಮಕ್ಕಳ ರಕ್ಷಣಾ ನೀತಿಯನ್ನು ಕನ್ನಡ ಭಾಷಾಂತರ ಮಾಡಲಾಗಿದ್ದು, ಮುದ್ರಣ ಹಂತದಲ್ಲಿದ್ದು, ಕನ್ನಡ ಪ್ರತಿಯನ್ನು ಪದವಿ ಪೂರ್ವ ಐಟಿಐ, ಪ್ಯಾರಾಮೆಡಿಕಲ್, ಡಿಪ್ಲೊಮಾ ಹಾಗೂ ತತ್ಸಮಾನ ಶಿಕ್ಷಣ ಸಂಸ್ಥೆಗಳಿಗೆ ಪೂರೈಸಿ ಅಲ್ಲಿ ದಾಖಲಾಗಿರುವ ಮಕ್ಕಳಿಗೆ ಅರಿವು ಮೂಡಿಸಲು ಕ್ರಮವಹಿಸಲಾಗುವುದು. ಮಕ್ಕಳ ರಕ್ಷಣಾ ಕಾರ್ಯಕ್ರಮಗಳ ಕುರಿತು ಮಾನ್ಯ ಇಲಾಖಾ ಸಚಿವರ ಸಂದೇಶವನ್ನು ಆಕಾಶವಾಣಿ ಮೂಲಕ ದಿನಾಂಕ:16.09.2024 ರಿಂದ 15.10.2024 ರವರೆಗೆ ಪ್ರಸಾರ ಮಾಡಲಾಗಿದೆ. ದಿನಾಂಕ: 11.08.2024 ರಿಂದ "ವಾತ್ಸಲ್ಯವಾಣಿ" ಎಂಬ 13 ವಾರಗಳ ಸರಣಿ ಕಾರ್ಯಕ್ರಮವನ್ನು ಆಕಾಶವಾಣಿ ಮೂಲಕ ಪ್ರಸಾರ ಮಾಡಲಾಗುತ್ತಿದ್ದು, ಈ ಕಾರ್ಯಕ್ರಮದಲ್ಲಿ ಮಾನ್ಯ ಇಲಾಖಾ ಸಚಿವರು, ಇಲಾಖಾ ಕಾರ್ಯದರ್ಶಿಗಳು, ನಿರ್ದೇಶಕರು ಸೇರಿದಂತೆ ಹಲವು ಅಧಿಕಾರಿಗಳು ಭಾಗವಹಿಸಿ ಜಾಗೃತಿ ಮೂಡಿಸಿದ್ದಾರೆ.

ಮಮಇ 192 ಮಭಾಬ 2024

(ಲಕ್ಷ್ಮೀ ಆರ್. ಹೆಬ್ಬಾಳ್ಕರ್)
ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.